## ಕರ್ನಾಟಕ ಸರ್ಕಾರದ ನಡವಳಿಗಳು

## ಜಲ ಸಂಪನ್ಮೂಲ ಇಲಾಖೆ

ವಿಷಯ:- ದಾವಣಗೆರೆ ಜಿಲ್ಲೆಯ ಜಗಳೂರು ತಾಲ್ಲೂಕಿನ 46 (ಒಟ್ಟು 53 ಕೆರೆಗಳು) ಕೆರೆಗಳಿಗೆ ತುಂಗಭದ್ರಾ ನದಿಯಿಂದ ನೀರನ್ನೆತ್ತಿ ಕೆರೆ ತುಂಬಿಸುವ ಯೋಜನೆಯ ರೂ.660.00 ಕೋಟಿಗಳ ವಿವರವಾದ ಯೋಜನಾ ವರದಿಗೆ ಆಡಳಿತಾತ್ಮಕ ಅನುಮೋದನೆ ನೀಡುವ ಕುರಿತು.

ಓದಲಾಗಿದೆ:-

1. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ಬೆಂಗಳೂರು ಇವರ ಪತ್ರ ಸಂಖ್ಯೆ:ಕನೀನಿ/ತಾಂತ್ರಿಕ/ಭದ್ರಾ/105/2018-19/6954 ದಿನಾಂಕ:20.02.2019. ಪತ್ರ ಸಂಖ್ಯೆ:ಕನೀನಿ/ತಾಂತ್ರಿಕ/ಭದ್ರಾ/105/2018-19/7901 ದಿನಾಂಕ:28.03.2019 ಮತ್ತು ಪತ್ರ ಸಂಖ್ಯೆ:1275 ದಿನಾಂಕ:14.06.2019.
2. ಸರ್ಕಾರದ ಆದೇಶ ಸಂಖ್ಯೆ:ಜಸಂಇ 79 ಎಂಎಂಜಿ 2019, ಬೆಂಗಳೂರು ದಿನಾಂಕ:30.08.2019.
3. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ಬೆಂಗಳೂರು ಇವರ ಪತ್ರ ಸಂಖ್ಯೆ:ಕನೀನಿ/ತಾಂತ್ರಿಕ/ಭದ್ರಾ/105/2018-19/2855 ದಿನಾಂಕ:04.09.2019.

---***---

**ಪ್ರಸ್ತಾವನೆ:**

ಮೇಲೆ ಓದಲಾದ (1) ರ ಪತ್ರಗಳಲ್ಲಿ ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ, ಬೆಂಗಳೂರು ಇವರು, ದಾವಣಗೆರೆ ಜಿಲ್ಲೆಯ ಜಗಳೂರು ತಾಲ್ಲೂಕಿನಲ್ಲಿರುವ ಒಟ್ಟಾರೆ 53 ಕೆರೆಗಳಿಗೆ ಒಳ ಹರಿವಿನ ಅಭಾವದಿಂದ ನೀರಿನ ಸಂಗ್ರಹಣೆಯಾಗದೇ ಇರುವುದರಿಂದ, ಸ್ಥಳೀಯ ರೈತರು ಹಾಗೂ ಜನ ಪ್ರತಿನಿಧಿಗಳು, ಜನ-ಜಾನುವಾರುಗಳಿಗೆ ಕುಡಿಯುವ ನೀರು ಹಾಗೂ ಅಂತರ್ಜಲ ಅಭಿವೃದ್ಧಿ ಪಡಿಸುವಂತೆ ಒತ್ತಾಯಿಸಿರುವುದರಿಂದ, ದಾವಣಗೆರೆ ಜಿಲ್ಲೆಯ ಜಗಳೂರು ತಾಲ್ಲೂಕಿನ 46 (ಒಟ್ಟು 53 ಕೆರೆಗಳು) ಕೆರೆಗಳಿಗೆ ತುಂಗಭದ್ರಾ ನದಿಯಿಂದ ನೀರನ್ನೆತ್ತಿ ಕೆರೆ ತುಂಬಿಸುವ ಯೋಜನೆಯನ್ನು ಪ್ರಸ್ತಾಪಿಸಲಾಗಿರುತ್ತದೆ ಎಂದು ತಿಳಿಸಿರುತ್ತಾರೆ. ಮುಂದುವರೆದು, ದಿನಾಂಕ:06.12.2018 ರಂದು ಜರುಗಿದ ನಿಗಮದ 45ನೇ ಅಂದಾಜು ಪರಿಶೀಲನಾ ಸಮಿತಿಯ ಸಭೆಯಲ್ಲಿ ಸದರಿ ಯೋಜನೆಯ ವಿವರವಾದ ಯೋಜನಾ ವರದಿಯನ್ನು ಮಂಡಿಸಲಾಗಿ ಸಮಿತಿಯು ತೀರುವಳಿ ನೀಡಿ, ನಿಗಮದ ನಿರ್ದೇಶಕರ ಮಂಡಳಿಯಿಂದ ಅನುಮೋದನೆ ಪಡೆಯಲು ಶಿಫಾರಸ್ಸು ಮಾಡಿರುತ್ತದೆ ಎಂದು ತಿಳಿಸಿರುತ್ತಾರೆ. ಅದರಂತೆ, ಯೋಜನೆಯ ವಿವರವಾದ ಯೋಜನಾ ವರದಿಯನ್ನು, ದಿನಾಂಕ:01.02.2019 ರಂದು ಜರುಗಿದ ನಿಗಮದ ನಿರ್ದೇಶಕರ ಮಂಡಳಿಯ 86ನೇ ಸಭೆಯಲ್ಲಿ ಮಂಡಿಸಲಾಗಿದ್ದು, 2018-19ನೇ ಸಾಲಿನ ದರಪಟ್ಟಿಯನ್ವಯ ತಯಾರಿಸಲಾಗಿರುವ ರೂ.660.00 ಕೋಟಿ ಮೊತ್ತದ ವಿವರವಾದ ಯೋಜನಾ ವರದಿಗೆ ಆಡಳಿತಾತ್ಮಕ ಅನುಮೋದನೆ ನೀಡುವಂತೆ ಮಂಡಳಿಯು ಸರ್ಕಾರಕ್ಕೆ ಶಿಫಾರಸ್ಸು ಮಾಡಿರುತ್ತದೆ; ಆದ್ದರಿಂದ, ದಾವಣಗೆರೆ ಜಿಲ್ಲೆಯ ಜಗಳೂರು ತಾಲ್ಲೂಕಿನ 46 (ಒಟ್ಟು 53 ಕೆರೆಗಳು) ಕೆರೆಗಳಿಗೆ ತುಂಗಭದ್ರಾ ನದಿಯಿಂದ ನೀರನ್ನೆತ್ತಿ ತುಂಬಿಸುವ ಯೋಜನೆಯ 2018-19ನೇ ಸಾಲಿನ ದರಪಟ್ಟಿಯನ್ವಯ ತಯಾರಿಸಲಾಗಿರುವ ರೂ.660.00 ಕೋಟಿ ಮೊತ್ತದ ವಿವರವಾದ ಯೋಜನಾ ವರದಿಗೆ ಆಡಳಿತಾತ್ಮಕ ಅನುಮೋದನೆ ನೀಡುವಂತೆ ಕೋರಿರುತ್ತಾರೆ.

ಸದರಿ ಪ್ರಸ್ತಾವನೆಗೆ ಆರ್ಥಿಕ ಇಲಾಖೆಯ ಅಭಿಪ್ರಾಯವನ್ನು ಕೋರಲಾಗಿ, ಆರ್ಥಿಕ ಇಲಾಖೆಯು 2018-19ರ ಆಯವ್ಯಯದ ಘೋಷಣೆಯಲ್ಲಿರುವಂತೆ ಯೋಜನೆಯ ಅಂದಾಜು ಮೊತ್ತವನ್ನು ರೂ.250.00 ಕೋಟಿಗಳಿಗೆ ಮಿತಿಗೊಳಿಸಬಹುದೆಂದು ಅಭಿಪ್ರಾಯ ಪಟ್ಟಿರುತ್ತದೆ. ಅದರಂತೆ, ಸಚಿವ ಸಂಪುಟದ ಅನುಮೋದನೆಯ ನಂತರ, ಮೇಲೆ ಓದಲಾದ (2) ರ ಆದೇಶದಲ್ಲಿ ಸರ್ಕಾರದ ಆದೇಶವನ್ನು ಹೊರಡಿಸಲಾಗಿತ್ತು.

...2

ಆದರೆ, ಈ ಸಂಬಂಧ ವ್ಯವಸ್ಥಾಪಕ ನಿರ್ದೇಶಕರು, ಕನೀನಿನಿ ರವರು ಮೇಲೆ ಓದಲಾದ (3) ರ ಪತ್ರದಲ್ಲಿ ಸರ್ಕಾರದ ಆದೇಶದಂತೆ ಯೋಜನೆಯನ್ನು ರೂ.250.00 ಕೋಟಿಗಳಿಗೆ ಸೀಮಿತಗೊಳಿಸಿದಲ್ಲಿ, ಅನುಮೋದಿತ ಮೊತ್ತಕ್ಕೆ ಯೋಜನೆಯನ್ನು ಕೈಗೆತ್ತಿಕೊಳ್ಳಲು ಸೂಕ್ತವಾಗಿರುವುದಿಲ್ಲವೆಂದು ತಿಳಿಸಿರುತ್ತಾರೆ.

ಈ ಹಿನ್ನೆಲೆಯಲ್ಲಿ, ಪ್ರಸ್ತಾವನೆಯನ್ನು ಪರಿಶೀಲಿಸಿ, ಈ ಕೆಳಗಿನಂತೆ ಆದೇಶಿಸಲಾಗಿದೆ.

**ಸರ್ಕಾರದ ಆದೇಶ ಸಂಖ್ಯೆ: ಜಸಂಇ 79 ಎಂಎಂಬಿ 2018, ಬೆಂಗಳೂರು, ದಿನಾಂಕ:07.09.2019.**

**ಅ) ಸರ್ಕಾರದ ಆದೇಶ ಸಂಖ್ಯೆ: ಜಸಂಇ 79 ಎಂಎಂಬಿ 2018 ಬೆಂಗಳೂರು ದಿನಾಂಕ:30.08.2019 ಅನ್ನು ಹಿಂಪಡೆಯಲಾಗಿದೆ.**

**ಆ) ದಾವಣಗೆರೆ ಜಿಲ್ಲೆಯ ಜಗಳೂರು ತಾಲ್ಲೂಕಿನ 46 (ಒಟ್ಟು 53 ಕೆರೆಗಳು) ಕೆರೆಗಳಿಗೆ ತುಂಗಭದ್ರಾ ನದಿಯಿಂದ ನೀರನ್ನೆತ್ತಿ ಕೆರೆ ತುಂಬಿಸುವ ಯೋಜನೆಯ 2018-19 ನೇ ಸಾಲಿನ ದರಪಟ್ಟಿಯನ್ವಯ ತಯಾರಿಸಲಾಗಿರುವ ರೂ.660.00 ಕೋಟಿಗಳ ವಿವರವಾದ ಯೋಜನಾ ವರದಿಗೆ ತಾತ್ವಿಕವಾಗಿ ಸಂಪೂರ್ಣ ಒಪ್ಪಿಗೆ ಸೂಚಿಸಿ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ. ಮುಂದುವರೆದು, ಪ್ರಸ್ತುತ ವರ್ಷದ ಅನುದಾನದಲ್ಲಿ ಸದರಿ ಯೋಜನೆಗೆ ರೂ.340.00 ಕೋಟಿಗಳನ್ನು ಒದಗಿಸಿಕೊಂಡು ಕಾಮಗಾರಿಯನ್ನು ಕೈಗೆತ್ತಿಕೊಳ್ಳಲು ಅನುಮೋದನೆ ನೀಡಲಾಗಿದೆ. ಬಾಕಿ ಕಾಮಗಾರಿಗಳನ್ನು 2ನೇ ಹಂತದಲ್ಲಿ ಕೈಗೊಳ್ಳುವುದು.**

ಈ ಆದೇಶವನ್ನು ಆರ್ಥಿಕ ಇಲಾಖೆಯ ಸಂಖ್ಯೆ:6281 ದಿನಾಂಕ:05.09.2019 ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಲಾಗಿದೆ.

**ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ**
**ಮತ್ತು ಅವರ ಹೆಸರಿನಲ್ಲಿ**

7/9

**(ಶ್ರೀಹರಿ ಎಸ್.ಆರ್)**
**ಸರ್ಕಾರದ ಅಧೀನ ಕಾರ್ಯದರ್ಶಿ(ತಾಂತ್ರಿಕ-1).**
**ಜಲ ಸಂಪನ್ಮೂಲ ಇಲಾಖೆ**

**ಪ್ರತಿಯನ್ನು:**

1. ಪ್ರಧಾನ ಮಹಾಲೇಖಾಪಾಲರು, (ಸಾಮಾನ್ಯ ಮತ್ತು ಸಾಮಾಜಿಕ ವಲಯ, ಲೆಕ್ಕಪರಿಶೋಧನೆ), ಕರ್ನಾಟಕ ಹೊಸ ಕಟ್ಟಡ ಆಡಿಟ್ ಭವನ ಅಂಚೆ ಪೆಟ್ಟಿಗೆ ಸಂಖ್ಯೆ:5398, ಬೆಂಗಳೂರು 01.
2. ಪ್ರಧಾನ ಮಹಾಲೇಖಾಪಾಲರು, (ಆರ್ಥಿಕ ಮತ್ತು ರಾಜಸ್ವ ವಲಯ ಲೆಕ್ಕಪರಿಶೋಧನೆ), ಕರ್ನಾಟಕ ಹೊಸ ಕಟ್ಟಡ ಆಡಿಟ್ ಭವನ ಅಂಚೆ ಪೆಟ್ಟಿಗೆ ಸಂಖ್ಯೆ:5398, ಬೆಂಗಳೂರು 01.
3. ಪ್ರಧಾನ ಮಹಾಲೇಖಾಪಾಲರು, (ಲೆಕ್ಕಗಳು ಮತ್ತು ಹಕ್ಕುಸ್ವಾಮ್ಯ), ಕರ್ನಾಟಕ ಬೆಂಗಳೂರು 01.
4. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ನಿಯಮಿತ ಬೆಂಗಳೂರು.
5. ಮುಖ್ಯ ಇಂಜಿನಿಯರ್, ತುಂಗಾ ಮೇಲ್ದಂಡೆ ಯೋಜನಾ ವಲಯ ಶಿವಮೊಗ್ಗ.
6. ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಆಪ್ತಕಾರ್ಯದರ್ಶಿಗಳು (ಸಚಿವ ಸಂಪುಟ) ಪ್ರಕರಣ ಸಂ:ಸಿ:512/2019 ದಿನಾಂಕ:06.09.2019 ರನ್ವಯ ಕಳುಹಿಸಿದೆ.
7. ಮಾನ್ಯ ಮುಖ್ಯ ಮಂತ್ರಿಯವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ.
8. ವಿಶೇಷಾಧಿಕಾರಿ ಹಾಗೂ ಪದನಿಮಿತ್ತ ಸರ್ಕಾರದ ಉಪಕಾರ್ಯದರ್ಶಿಗಳು, ಆರ್ಥಿಕ ಇಲಾಖೆ (ಲೋ.ಇ, ಆರ್ಥಿಕ ಕೋಶ) ವಿಧಾನ ಸೌಧ ಬೆಂಗಳೂರು.
9. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.